# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **350** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **15/02/2024** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕರ ಮಕ್ಕಳಿಗೆ ವ್ಯಾಸಂಗದ ಸಲುವಾಗಿ ಸರ್ಕಾರದಿಂದ ನೀಡಲಾಗುತ್ತಿರುವ ಸವಲತ್ತುಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ನೀಡುತ್ತಿರುವ ಶೈಕ್ಷಣಿಕ ಸಹಾಯಧನದ ವಿವರ ಈ ಕೆಳಕಂಡಂತಿದೆ.<br><br>**ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br><br>ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಪ್ರಸ್ತುತ ಮಂಡಳಿ ವತಿಯಿಂದ ನೀಡಿರುವ ಮತ್ತು ನೀಡಲಾಗುತ್ತಿರುವ ಸವಲತ್ತುಗಳ ವಿವರಗಳು ಈ ಕೆಳಕಂಡಂತಿವೆ.<br><br>• ನೋಂದಾಯಿತ ಕಟ್ಟಡ ಕಾರ್ಮಿಕರ ಇಬ್ಬರು ಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ಕಲಿಕೆ ಭಾಗ್ಯದಡಿ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. ಶೈಕ್ಷಣಿಕ ಸೌಲಭ್ಯದ ವಿವರವನ್ನು **ಅನುಬಂಧ-01 ರಲ್ಲಿ** ಒದಗಿಸಲಾಗಿದೆ.<br>• ಎಂಟನೇ ತರಗತಿಯಿಂದ ಹತ್ತನೇ ತರಗತಿ ವರೆಗೆ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಟ್ಯಾಬ್ ಯೋಜನೆಯಡಿ ಉಚಿತ ಟ್ಯಾಬ್‌ಗಳ ವಿತರಣೆ.<br>• ಪ್ರಥಮ ಪದವಿಪೂರ್ವ ಮತ್ತು ದ್ವಿತೀಯ ಪದವಿ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಲ್ಯಾಪ್ ಟಾಪ್ ಯೋಜನೆಯಡಿ ಉಚಿತ ಲ್ಯಾಪ್ ಟಾಪ್‌ಗಳ ವಿತರಣೆ.<br>• ಒಂದನೇ ತರಗತಿಯಿಂದ ಐದನೇ ತರಗತಿವರೆಗೆ, ಆರನೇ ತರಗತಿಯಿಂದ ಎಂಟನೇ ತರಗತಿವರೆಗೆ ಮತ್ತು ಒಂಬತ್ತನೇ ತರಗತಿಯಿಂದ ಹನ್ನೆರಡನೆ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಶಾಲಾ ಶಿಕ್ಷಣ ಕಿಟ್ ಗಳ ವಿತರಣೆ. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಮಂಡಳಿಯು ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಶಿಪ್ ನೀಡುವ ಯಾವುದೇ ಯೋಜನೆಯನ್ನು ಜಾರಿಗೊಳಿಸುತ್ತಿರುವುದಿಲ್ಲ. ಆದರೆ, ಮಂಡಳಿಯು ಜಾರಿಗೊಳಿಸುತ್ತಿರುವ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"ಯಡಿ, ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಈ ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಮಾಲೀಕರಿಂದ ಪ್ರತಿ ಕಾರ್ಮಿಕರಿಗೆ ರೂ 40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ. 20/- ರಂತೆ ವಂತಿಗೆಯಾಗಿ ನೀಡಲಾಗುತ್ತಿದೆ. ಈ ವಂತಿಗೆಯ ಮೊತ್ತವನ್ನು ಕಲ್ಯಾಣ ಯೋಜನೆಗಳಡಿ ಸಂಘಟಿತ ಕಾರ್ಮಿಕರ ಮಕ್ಕಳಿಗೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ. |
| ಆ) | ಸದರಿ ಸವಲತ್ತುಗಳನ್ನು ನೀಡುವಲ್ಲಿ ಅನುಸರಿಸಲಾಗುವ ಮಾನದಂಡಗಳೇನು; (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಹಾಯಧನ ನೀಡಲು ಅನುಸರಿಸಲಾಗುತ್ತಿರುವ ಮಾನದಂಡಗಳ ವಿವರ ಈ ಕೆಳಕಂಡಂತಿದೆ.<br>**ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಪ್ರಸ್ತುತ ಮಂಡಳಿ ವತಿಯಿಂದ ನೀಡಲಾಗುತ್ತಿರುವ ಶೈಕ್ಷಣಿಕ ಧನ ಸಹಾಯ ನೀಡಲು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ:<br>• ಮಂಡಳಿಯವತಿಯಿಂದ ನೀಡಿರುವ ಗುರುತಿನ ಚೀಟಿ ಪ್ರತಿಯನ್ನು ಸಲ್ಲಿಸುವುದು.<br>• ಮಂಡಳಿಯ ಸದಸ್ಯತ್ವ ಚಾಲ್ತಿಯಲ್ಲಿರಬೇಕು<br>• ಫಲಾನುಭವಿ ಸದಸ್ಯತ್ವದ ನೈಜ್ಯತೆಯ ಬಗ್ಗೆ ಸಂಬಂಧಪಟ್ಟ ನೋಂದಾಣಾಧಿಕಾರಿಗಳಿಂದ ಪರಿಶೀಲನಾ ವರದಿ ಪಡೆಯಲಾಗುವುದು.<br>• ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಮತ್ತು ಆಧಾರ್ ಕಾರ್ಡ್ ಪ್ರತಿಗಳು<br>• ಫಲಾಭವಿಯ ಮಗ/ ಮಗಳು ಉತ್ತೀರ್ಣ ಆಗಿರುವ ಅಂಕಪಟ್ಟಿ ಹಾಗೂ ವ್ಯಾಸಂಗ ಮಾಡುತ್ತಿರುವ ಬಗ್ಗೆ ಶಾಲೆಯ ಮುಖ್ಯಸ್ಥರಿಂದ ಪಡೆದು ವ್ಯಾಸಂಗ ಮೂಲ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.<br>• ಫಲಾನುಭವಿಯ ಪ್ರಸ್ತುತ ಅರ್ಜಿಯು ಈ ಹಿಂದೆ ಶೈಕ್ಷಣಿಕ ಸಹಾಯಧನ ಪಡೆದ ಇಬ್ಬರು ಮಕ್ಕಳಿಗೆ ಅನ್ವಯಿಸಲಾಗಿದೆಯೇ ಎಂದು ಖಾತ್ರಿ ಪಡಿಸಿಕೊಳ್ಳಬೇಕು. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**:<br>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"ಯಡಿ, ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ 2 ಮಕ್ಕಳಿಗೆ ಮಾತ್ರ ಅನ್ವಯ ವಾಗುತ್ತದೆ.<br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಸವಲತ್ತುಗಳನ್ನು ನೀಡುವಲ್ಲಿ ಅನುಸರಿಸಲಾಗುವ ಮಾನದಂಡಗಳನ್ನು **ಅನುಬಂಧ-02** ರಲ್ಲಿ ಒದಗಿಸಲಾಗಿದೆ. |
| ಇ) | ಯಾವ ಯಾವ ವರ್ಗದ ಮಕ್ಕಳಿಗೆ ಎಷ್ಟು ಮೊತ್ತವನ್ನು ನೀಡಲಾಗುವುದು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ನೀಡುತ್ತಿರುವ ಶೈಕ್ಷಣಿಕ ಸಹಾಯಧನದ ವಿವರ ಈ ಕೆಳಕಂಡಂತಿದೆ.<br>**ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ನೋಂದಾಯಿತ ಕಟ್ಟಡ ಕಾರ್ಮಿಕರ ಇಬ್ಬರು ಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ಕಲಿಕೆ ಭಾಗ್ಯದಡಿ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. ಶೈಕ್ಷಣಿಕ ಸೌಲಭ್ಯದ ವಿವಿಧ ವರ್ಗದ ವಿವರವನ್ನು **ಅನುಬಂಧ-01** ರಲ್ಲಿ ಒದಗಿಸಲಾಗಿದೆ.<br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**:<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಎಲ್ಲಾ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ಮಾತ್ರ ನೀಡಲಾಗುತ್ತಿದೆ.<br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಈ ಕಲ್ಯಾಣ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯವನ್ನು ನೀಡಲಾಗುತ್ತಿದೆ. ವಿವಿಧ ವರ್ಗದ ಮಕ್ಕಳಿಗೆ ನೀಡಲಾಗುತ್ತಿರುವ ಮೊತ್ತದ ವಿವರಗಳನ್ನು **ಅನುಬಂಧ-02** ರಲ್ಲಿ ಒದಗಿಸಲಾಗಿದೆ. |
| ಈ) | ಈ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿವೇತನ ಪ್ರೋತ್ಸಾಹಧನವನ್ನು ಹೆಚ್ಚಿಸಲು ಸರ್ಕಾರ ಚಿಂತಿಸುವುದೇ? | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ನೀಡುತ್ತಿರುವ ಶೈಕ್ಷಣಿಕ ಸಹಾಯಧನವನ್ನು ಹೆಚ್ಚಿಸಲು ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ. |

| | | |
|---|---|---|
| | | **ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ಪ್ರಸ್ತುತ ವಿತರಿಸುತ್ತಿರುವ ಶೈಕ್ಷಣಿಕ ಸಹಾಯಧನದ ಮೊತ್ತವನ್ನು ಭಾಗಶಃ ಪರಿಷ್ಕರಿಸಲು ಮಂಡಳಿಯವತಿಯಿಂದ ಕ್ರಮ ಕೈಗೊಳ್ಳಲಾಗುತ್ತಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**:<br>ಸದ್ಯದಲ್ಲಿ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿವೇತನ ಪ್ರೋತ್ಸಾಹಧನವನ್ನು ಹೆಚ್ಚಿಸುವಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.<br><br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>2023 ರಲ್ಲಿ ಧನಸಹಾಯದ ಮೊತ್ತವನ್ನು ದ್ವಿಗುಣಗೊಳಿಸಿ ಹೆಚ್ಚಿಸಲಾಗಿದೆ. |

**ಕಾಇ 107 ಎಲ್‌ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-01

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 350 (243)**

| ಕ್ರ ಸಂ | ವಿದ್ಯಾಭ್ಯಾಸದ ವಿವರ(ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯ ಧನದ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | **1100** |
| 2 | 6 ರಿಂದ 7 ನೇ ತರಗತಿ | **1250** |
| 3 | 8 ನೇ ತರಗತಿ | **1350** |
| 4 | 9 ಹಾಗೂ 10ನೇ ತರಗತಿ | **3000** |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | **4600** |
| 6 | ಪದವಿ | **6000** |
| 7 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | **10000** |
| 8 | ಸ್ನಾತಕೋತ್ತರ ಪದವಿ | **10000** |
| 9 | ಪಾಲಿಟೆಕ್ನಿಕ್ / ಡಿಪ್ಲೋಮಾ/ ಐಟಿಐ | **4600** |
| 10 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪ್ಯಾರಾ ಮೆಡಿಕಲ್ ಕೋರ್ಸ್ / ಎಕ್ಸಿಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | **10000** |
| 11 | ಬಿ.ಎಡ್ | **6000** |
| 12 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | **11000** |
| 13 | ಎಲ್‌ಎಲ್ ಬಿ/ಎಲ್ ಎಲ್ ಎಂ | **10000** |
| 14 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | **10000** |
| 15 | ಎಮ್‌ಡಿ ಮೆಡಿಕಲ್ | **12000** |
| 16 | ಡಿ.ಎಡ್ | **4600** |
| 17 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | **11000** |
| 18 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್ ಇಆರ್/ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | **11000** |

# ಅನುಬಂಧ-02

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 350**

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಬೆಂಗಳೂರು**
**ಕಾರ್ಮಿಕ ಕಲ್ಯಾಣ ಯೋಜನೆಗಳ ವಿವರ**

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ವಲಯ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಕಲ್ಯಾಣ ಯೋಜನೆಗಳು ಜಾರಿಯಲ್ಲಿರುತ್ತದೆ.

**ಸೂಚನೆ :**

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು ರೂ. 20/- ಹಾಗೂ ಮಾಲೀಕರು ರೂ. 40/- ರಂತೆ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಕೆಯನ್ನು ಪಾವತಿಸತಕ್ಕದ್ದು.
2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಕಾರ್ಖಾನೆಗಳು/ಸಂಸ್ಥೆಗಳು klwb.karnataka.gov.in ಇಲ್ಲಿ ನೊಂದಾಯಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
3. ವಂತಿಕೆ ಪಾವತಿ ಮಾಡುವ ಕಾರ್ಖಾನೆಗಳು/ ಕಾರ್ಯಸಂಸ್ಥೆಗಳು klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ಆನ್‌ಲೈನ್ ಮೂಲಕ ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

**ಈ ಕೆಳಗಿನ ಯೋಜನೆಗೆ ಕಾರ್ಮಿಕರ ಮಾಸಿಕ ವೇತನ ರೂ. 35,000/- ಗಿಂತ ಮೀರಿರಬಾರದು.**

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**: ಪ್ರೌಢಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.6,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/- ಪದವಿ ಶಿಕ್ಷಣಕ್ಕಾಗಿ ರೂ.10,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/- ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. **(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ. ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**